ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 27-01-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | 8ನೇ ಬೆಂಗಳೂರು ಅಂತರ ರಾಷ್ಟ್ರೀಯ ಸಿನಿಮೋತ್ಸವ ಉದ್ಘಾಟನಾ ಸಮಾರಂಭ:<br><br>ಉದ್ಘಾಟನೆ:<br><br>ಶ್ರೀಮತಿ ಜಯಬಚ್ಚನ್,<br>ರಾಜ್ಯಸಭಾ ಸದಸ್ಯರು ಹಾಗೂ ಭಾರತೀಯ ಚಲನಚಿತ್ರ ರಂಗದ ಹಿರಿಯ ತಾರೆ<br><br>ಅಧ್ಯಕ್ಷತೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ | 28-1-2016<br>ಗುರುವಾರ<br>ಸಂಜೆ<br>5-30 ಗಂಟೆಗೆ | ವಿಧಾನ ಸೌಧ ಮುಂಬಾಗ, ಪೂರ್ವದ್ವಾರ, ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

ಪತ್ರಿಕಾ ಪ್ರಕಟಣೆ

# 8ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವಕ್ಕೆ ನಾಳೆ ಚಾಲನೆ

ಬೆಂಗಳೂರು, ಜನವರಿ 27 (ಕರ್ನಾಟಕ ವಾರ್ತೆ)

ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಚಲನಚಿತ್ರ ಅಕಾಡೆಮಿ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಸಂಯುಕ್ತಾಶ್ರಯದಲ್ಲಿ ಜನವರಿ 28 ರಂದು ಸಂಜೆ 5-30 ಗಂಟೆಗೆ ಬೆಂಗಳೂರು ವಿಧಾನಸೌಧದ ಮುಂಭಾಗ (ಪೂರ್ವದ್ವಾರ) ದಲ್ಲಿ 8ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವಕ್ಕೆ ಚಾಲನೆ ದೊರೆಯಲಿದೆ.

ಸಿನಿಮೋತ್ಸವದ ಉದ್ಘಾಟನೆಯನ್ನು ರಾಜ್ಯಸಭಾ ಸದಸ್ಯರು ಹಾಗೂ ಭಾರತೀಯ ಚಲನಚಿತ್ರರಂಗದ ಹಿರಿಯ ತಾರೆ ಶ್ರೀಮತಿ ಜಯಾಬಚ್ಚನ್ ಅವರು ನೆರವೇರಿಸುವರು. ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ವಹಿಸಲಿದ್ದಾರೆ.

ಸಮಾರಂಭದ ಗೌರವ ಅತಿಥಿಗಳಾಗಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ, ವಿಧಾನಸಭಾಧ್ಯಕ್ಷ ಕಾಗೋಡು ತಿಮ್ಮಪ್ಪ ಆಗಮಿಸುವರು. ರಾಜ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಖಾತೆ ಸಚಿವ ಆರ್. ರೋಷನ್ ಬೇಗ್ ಅವರು ಆಶಯಭಾಷಣ ಮಾಡುವರು.

ಚಿತ್ರೋತ್ಸವದ ಸ್ಮರಣ ಸಂಚಿಕೆಯನ್ನು ಹಿರಿಯ ಚಲನಚಿತ್ರ ನಿರ್ದೇಶಕ ಹಾಗೂ ನಿರ್ಮಾಪಕ ಶ್ರೀ ಸಂಜಯ್‌ಲೀಲಾ ಬನ್ಸಾಲಿ ಬಿಡುಗಡೆ ಮಾಡುವರು. ಸಮಾರಂಭದ ವಿಶೇಷ ಆಹ್ವಾನಿತರಾಗಿ ಬೆಂಗಳೂರು ಅಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್, ಗೃಹ ಸಚಿವ ಡಾ. ಜಿ. ಪರಮೇಶ್ವರ್, ವಸತಿ ಸಚಿವ ಡಾ. ಎಂ. ಹೆಚ್. ಅಂಬರೀಶ್, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಜಗದೀಶ್ ಶೆಟ್ಟರ್, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಕೆ. ಎಸ್. ಈಶ್ವರಪ್ಪ, ಲೋಕಸಭಾ ಸದಸ್ಯ ಪಿ.ಸಿ. ಮೋಹನ್, ಬೆಂಗಳೂರು ಮಹಾಪೌರ ಬಿ.ಎನ್. ಮಂಜುನಾಥ ರೆಡ್ಡಿ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು ಪಾಲ್ಗೊಳ್ಳುವರು.

ಮುಖ್ಯ ಅತಿಥಿಗಳಾದ ಹಾಲಿವುಡ್ ಚಲನಚಿತ್ರ ನಿರ್ಮಾಪಕ ಡಾ. ಅಶೋಕ್ ಅಮೃತರಾಜ್, ಕನ್ನಡ ಚಲನಚಿತ್ರ ರಂಗದ ಖ್ಯಾತ ಕಲಾವಿದರಾದ ಡಾ. ಶಿವರಾಜ್‌ಕುಮಾರ್ ಮತ್ತು ಸುದೀಪ್, ತೆಲುಗು ಚಲನಚಿತ್ರ ಕಲಾವಿದ ಡಿ. ವೆಂಕಟೇಶ್ ಅವರು ಪಾಲ್ಗೊಳ್ಳುವರು. ಕನ್ನಡ ಚಲನಚಿತ್ರ ನಟಿ ಕುಮಾರಿ ಅಮೂಲ್ಯ ಅವರು ದೀಪ ನೆರವು ನೀಡುವರು.

ಬಾಬು:ಜಿಪಿಆರ್.

# ಹೊಸಬೆಳಕು –ಸರ್ಕಾರದಿಂದ ರಿಯಾಯಿತಿ ದರದಲ್ಲಿ ಎಲ್.ಇ.ಡಿ ಬಲ್ಬು ವಿತರಿಸುವ ಯೋಜನೆ

ಬೆಂಗಳೂರು, ಜನವರಿ 27 ( ಕರ್ನಾಟಕ ವಾರ್ತೆ ) :

ಕರ್ನಾಟಕ ಸರ್ಕಾರದ ಇಂಧನ ಇಲಾಖೆಯು ಕೇಂದ್ರ ಇಂಧನ ಮಂತ್ರಾಲಯದ ಸ್ವಾಮ್ಯ ಸಂಸ್ಥೆಯಾದ ಮೆ// **Energy Efficiency Services Limited (EESL)** ರವರ ಸಹಯೋಗದೊಂದಿಗೆ, ಗೃಹಬಳಕೆ ಉತ್ತಮ ವಿದ್ಯುತ್ ದೀಪ ಅಳವಡಿಕೆ ಕಾರ್ಯಕ್ರಮದಡಿಯಲ್ಲಿ ಎಲ್.ಇ.ಡಿ. ಬಲ್ಬುಗಳನ್ನು ಅಗ್ಗದ ದರದಲ್ಲಿ ವಿತರಿಸುವ 'ಹೊಸಬೆಳಕು' ಎಂಬ ಯೋಜನೆಯಡಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆ ಜಾರಿಯಾದ ಒಂದು ತಿಂಗಳಲ್ಲಿ 8 ಲಕ್ಷ ಎಲ್.ಇ.ಡಿ ಬಲ್ಬುಗಳನ್ನು ಗ್ರಾಹಕರಿಗೆ ವಿತರಿಸಲಾಗಿದೆ. ಇದರಿಂದ ಈ ಯೋಜನೆಗೆ ಸಾರ್ವಜನಿಕ ಪ್ರೋತ್ಸಾಹ ನೀಡುತ್ತಿದ್ದು ಅವರು ತಮ್ಮ ಮನೆಗಳಲ್ಲಿ ಎಲ್.ಇ.ಡಿ ವಿದ್ಯುತ್ ದೀಪಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಪ್ರತಿಯಾಗಿ ರಾಜ್ಯದ ಇಂಧನ ಉಳಿತಾಯದಲ್ಲಿ ಪ್ರೋತ್ಸಾಹಿಸುತ್ತಿದ್ದಾರೆ.

ಗೃಹಬಳಕೆ ಉತ್ತಮ ವಿದ್ಯುತ್ ದೀಪ ಅಳವಡಿಕೆ ಕಾರ್ಯಕ್ರಮ (ಡಿ.ಇ.ಎಲ್.ಪಿ) ದ ಅಡಿಯಲ್ಲಿ, 9 ವ್ಯಾಟ್ ಸಾಮರ್ಥ್ಯದ ಎಲ್.ಇ.ಡಿ ಬಲ್ಬುಗಳನ್ನು ಪ್ರಸ್ತುತ ರೂ 100/– ಪ್ರತಿ ಎಲ್.ಇ.ಡಿ ಬಲ್ಬುನಂತೆ (9ವ್ಯಾಟ್ ಎಲ್.ಇ.ಡಿ. ಬಲ್ಬುನ ಮಾರುಕಟ್ಟೆ ದರವು ಅಂದಾಜು ರೂ 350/– ಆಗಿರುತ್ತದೆ) ವಿತರಿಸಲಾಗುತ್ತಿದೆ. ಎಲ್.ಇ.ಡಿ. 9 ವ್ಯಾಟ್ ಸಾಮರ್ಥ್ಯದ ಬಲ್ಬಿನ ಸಾಮರ್ಥ್ಯವು 60 ವ್ಯಾಟ್ ಸಾಮರ್ಥ್ಯದ ಸಾಂಪ್ರದಾಯಕ ಬುರುಡೆ ಬಲ್ಬ್ ಮತ್ತು 14 ವ್ಯಾಟ್ ಸಿ.ಎಫ್.ಎಲ್. ಬಲ್ಬುಗಳಿಗೆ ಸಮನಾಗಿರುತ್ತದೆ. ಈ ಯೋಜನೆಯಡಿಯಲ್ಲಿ ಮಾರಾಟ ಮಾಡಲ್ಪಡುವ ಬಲ್ಬುಗಳು ಅತ್ಯುತ್ತಮ ಗುಣಮಟ್ಟದ್ದಾಗಿದ್ದು, ಮೂರು ವರ್ಷಗಳ ಬಾಳ್ವಿಕೆಯ ಭರವಸೆಯನ್ನು ಕೂಡ ಹೊಂದಿರುತ್ತವೆ. ಪ್ರತಿ ಎಲ್.ಇ.ಡಿ ಬಲ್ಬುಗಳ ಉಪಯೋಗದಿಂದ ವಿದ್ಯುತ್ ಬಳಕೆಯಲ್ಲಿ ವಾರ್ಷಿಕ ರೂ 118/– ಉಳಿತಾಯವಾಗುತ್ತದೆ, ಹೀಗಾಗಿ ಒಂದು ವರ್ಷದೊಳಗೆ ಪ್ರತಿಯೊಂದು ಬಲ್ಬು ವೆಚ್ಚವನ್ನು ಮರಳಿ ಗಳಿಸಿದಂತಾಗುತ್ತದೆ. ಮೂರು ವರ್ಷಗಳ ಅವಧಿಯಲ್ಲಿ ಯಾವುದೇ ರೀತಿಯ ತಾಂತ್ರಿಕ ಕಾರಣಗಳಿಂದ ಎಲ್.ಇ.ಡಿ ಬಲ್ಬು ಹಾಳಾದಲ್ಲಿ ಮೆ//**EESL** ರವರು ಉಚಿತವಾಗಿ ಬದಲಾಯಿಸಿ ಕೊಡಲಾಗುತ್ತದೆ.

ಬೆಂಗಳೂರಿನಲ್ಲಿ ವಿತರಣಾ ಕೇಂದ್ರಗಳು:

ಎಲ್.ಇ.ಡಿ ಬಲ್ಬುಗಳನ್ನು ಬೆಸ್ಕಾಂ ವ್ಯಾಪ್ತಿಯ ಎಲ್ಲಾ ಕಾರ್ಯ ಮತ್ತು ಪಾಲನಾ ಉಪವಿಭಾಗ ಕಚೇರಿಗಳಲಿ ದೊರಕುವಂತೆ ಮಾಡಲಾಗಿದೆ. ಮುಂದುವರೆದು ಎಲ್.ಇ.ಡಿ. ಬಲ್ಬುಗಳನ್ನು ಕೆಳಕಂಡ ಬೆಂಗಳೂರು ಒನ್ ಕೇಂದ್ರಗಳಲ್ಲಿ ಅನುಕೂಲ ಮಾಡಲಾಗಿದೆ. ವಿತರಣಾ ಕೇಂದ್ರಗಳ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ತಮ್ಮ ಸಮೀಪದ ಎಲ್.ಇ.ಡಿ ಬಲ್ಬು ವಿತರಣಾ ಕೇಂದ್ರದ ಮಾಹಿತಿಯನ್ನು ಪಡೆಯಲು ಗ್ರಾಹಕರು **www.delp.in** ಅಂತರ್ಜಾಲ ತಾಣದ ಮುಖಾಂತರ ಕೂಡ ಪಡೆಯಬಹುದು.

**ಅಗತ್ಯವಾದ ದಾಖಲೆಗಳು:**

**ಈ ಯೋಜನೆಯ ಲಾಭ ಪಡೆಯಲು ಗ್ರಾಹಕರು ಇತ್ತೀಚಿನ ವಿದ್ಯುಚ್ಛಕ್ತಿ ಬಿಲ್‌ನೊಂದಿಗೆ ಗುರುತಿನ ಚೀಟಿ ತೋರಿಸಿ ಎಲ್.ಇ.ಡಿ. ಬಲ್ಬುಗಳನ್ನು ಪಡೆಯಬಹುದಾಗಿರುತ್ತದೆ.**

**ಬಾಬು/ಕೆಎಂ**

# ಜ. 30 ರ ಹುತ್ಮಾತರ ದಿನ : ಮೌನ ಆಚರಣೆಗೆ ಸ್ಥಾಯಿ ಸೂಚನೆಗಳು

ಬೆಂಗಳೂರು, ಜನವರಿ 27 (ಕರ್ನಾಟಕ ವಾರ್ತೆ)

ಭಾರತ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿವರ್ಷ ಜನವರಿ 30 ರಂದು ಪೂರ್ವಾಹ್ನ 11–00 ಗಂಟೆಗೆ ಎಲ್ಲಾ ಕೆಲಸ ಕಾರ್ಯಗಳನ್ನು ಸ್ಥಗಿತಗೊಳಿಸಿ ಮೌನ ಆಚರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರತಿ ವರ್ಷವೂ ರಾಜ್ಯ ಸರ್ಕಾರದಿಂದ ಸೂಚನೆಗಳನ್ನು ನೀಡಲಾಗುತ್ತಿದೆ. ಹುತಾತ್ಮರ ಸ್ಮರಣಾರ್ಥವಾಗಿ ಜನವರಿ 30 ರಂದು ನಡೆಸುವ ಮೌನಾಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಸ್ಥಾಯಿ ಸೂಚನೆಗಳನ್ನು ನೀಡಲಾಗಿದೆ.

ಜನವರಿ 30 ರಂದು ಪೂರ್ವಾಹ್ನ 11.00 ಗಂಟೆಗೆ ರಾಜ್ಯದೆಲ್ಲೆಡೆ ಎಲ್ಲಾ ಕೆಲಸ ಕಾರ್ಯಗಳನ್ನು ಮತ್ತು ಚಲನೆಯನ್ನು ಸ್ಥಗಿತಗೊಳಿಸಿ 2 ನಿಮಿಷಕಾಲ ಮೌನ ಆಚರಿಸುವುದು.

ಎಲ್ಲಿ ಸೈರನ್‌ಗಳು ಅಥವಾ ಸೈನಿಕರ ಬಂದೂಕುಗಳು ಲಭ್ಯವಿವೆಯೋ ಅಂತಹ ಕಡೆಗೆ ಎರಡು ನಿಮಿಷ ಮೌನ ಆಚರಣೆಯ ಕಾಲವನ್ನು ಪ್ರಾರಂಭ ಮತ್ತು ಮುಕ್ತಾಯಕ್ಕೆ ಸೈರನ್ ಅಥವಾ ಸೈನಿಕರ ಬಂದೂಕುಗಳ ಶಬ್ಧದ ಮೂಲಕ ಎರಡು ನಿಮಿಷ ಮೌನ ಆಚರಣೆ ಮಾಡುವುದು. ಪೂರ್ವಾಹ್ನ 10.59 ರಿಂದ 11.00 ಗಂಟೆಯವರೆಗೆ ಸೈರನ್ ಬಂದೂಕು ಶಬ್ಧಮಾಡಿಸುವುದು ಹಾಗೂ ಎರಡು ನಿಮಿಷದ ಮೌನ ಆಚರಣೆಯ ನಂತರ ಪುನ: 11.02 ರಿಂದ 11.03 ನಿಮಿಷದವರೆಗೆ ಸೈರನ್/ಬಂದೂಕು ಶಬ್ಧವನ್ನು ಮಾಡಿಸುವುದು. ಈ ಪದ್ಧತಿಯನ್ನು ಸೈರನ್/ಬಂದೂಕು ಸೌಲಭ್ಯವಿರುವ ಕಡೆ ಅಳವಡಿಸಿಕೊಳ್ಳುವುದು.

ಶಬ್ದವು (ಎಲ್ಲಿ ಲಭ್ಯ ಇದೆಯೋ ಅಲ್ಲಿ) ಕೇಳಿದ ಕೂಡಲೇ ಅಲ್ಲಿ ವ್ಯಕ್ತಿಗಳು ಆರಂಭದ ಸೂಚನೆಗಾಗಿ, ನಿಂತುಕೊಳ್ಳಬೇಕು ಮತ್ತು ಮೌನವನ್ನು ಆಚರಿಸಬೇಕು. ಪ್ರತಿಯೊಬ್ಬ ವ್ಯಕ್ತಿಯು ತನ್ನ ಕೊಠಡಿಯಲ್ಲಿ ಅಥವಾ ಇತರೆ ಯಾವುದೇ ಸ್ಥಳದಲ್ಲಿ ನಿಂತುಕೊಂಡು ಮೌನ ಆಚರಿಸುವುದಕ್ಕಿಂತ ಒಂದೇ ವೇಳೆಗೆ ವ್ಯಕ್ತಿಗಳು ಒಂದು ಸ್ಥಳದಲ್ಲಿ ಸೇರಿ ಮೌನ ಆಚರಿಸಿದರೆ ಅದು ತುಂಬಾ ಪರಿಣಾಮಕಾರಿ ಮತ್ತು ಪ್ರಭಾವಶಾಲಿ (effective and impressive) ಆಗುತ್ತದೆ. ಆದಾಗ್ಯೂ ಇದು ಕೆಲಸ ಕಾರ್ಯಗಳಿಗೆ ತೀವ್ರ ತೊಂದರೆ ಆಗುವಂತಿದ್ದರೆ ಮೇಲೆ ತಿಳಿಸಿದಂತೆ ಒಂದೇ ಸ್ಥಳದಲ್ಲಿ ಸೇರಲು ಪ್ರಯತ್ನಿಸದೇ ಇರಬಹುದು. ಈ 2 ನಿಮಿಷಗಳಲ್ಲಿ ಎಲ್ಲಾ ವರ್ಕ್‌ಶಾಪ್‌ಗಳು ಮತ್ತು ಕಾರ್ಖಾನೆಗಳು ಕೆಲಸ ಸ್ಥಗಿತಗೊಳಿಸಬೇಕು. ಈ 2 ನಿಮಿಷದ ಅವಧಿಯಲ್ಲಿ ವರ್ಕ್‌ಶಾಪ್‌ಗಳು ಮತ್ತು ಕಾರ್ಖಾನೆಗಳು ಶಬ್ದ ಪ್ರಸಾರ ಮಾಡುವುದನ್ನು ನಿಲ್ಲಿಸಬೇಕು ಮತ್ತು ರಸ್ತೆಗಳಲ್ಲಿ ಸಂಚಾರ ಸ್ಥಗಿತಗೊಳಿಸಬೇಕು. ವಿಮಾನಗಳು, ಹಡಗುಗಳು, ರೈಲುಗಳು ಹೊರಡಲು

ಬೆಳಿಗ್ಗೆ 11.00 ಗಂಟೆಯೆಂದು ನಿಗದಿಪಡಿಸಿದ್ದಲ್ಲಿ ಅಂತಹವುಗಳನ್ನು ಆಯಾ ನಿಲ್ದಾಣಗಳಲ್ಲಿ 2 ನಿಮಿಷಗಳ ಕಾಲ ತಡೆ ಹಿಡಿಯಬೇಕು.

ಸಂಕೇತ (Signal) ವ್ಯವಸ್ಥೆ ಇರದಂತಹ ಪ್ರದೇಶದಲ್ಲಿ ಬೆಳಿಗ್ಗೆ 11.00 ಗಂಟೆಗೆ 2 ನಿಮಿಷಗಳ ಮೌನ ಆಚರಿಸಲು ಸಂಬಂಧಪಟ್ಟವರಿಗೆಲ್ಲ ಸೂಕ್ತ ನಿರ್ದೇಶನವನ್ನು ಕಳುಹಿಸುವುದು.

ಇಲಾಖಾ ಮುಖ್ಯಸ್ಥರು ಮತ್ತು ಜಿಲ್ಲಧಿಕಾರಿಗಳು ವಿವರವಾದ ಕಾರ್ಯಕ್ರಮಗಳನ್ನು ರೂಪಿಸುವ ಸಂಪೂರ್ಣ ಜವಾಬ್ದಾರಿಯುಳ್ಳವರಾಗಿರುತ್ತಾರೆ. ಬೆಳಿಗ್ಗೆ 10.44 ರಿಂದ 10.56 ಗಂಟೆವರೆಗೆ (1) "ಸುಮಿರನ ಕರಲೆ ಮೇರೆ ಮನ್" 2) ವೈಷ್ಣವೋ ಜನತೋ ತೇನೇ ಕಹಿಯೇ" ಮತ್ತು (3) "ರಘುಪತಿ ರಾಘವ ರಾಜಾರಾಂ" ಈ ಕ್ರಮದಲ್ಲಿ 3 ಭಜನೆಗಳನ್ನು ಹಾಡಬೇಕು ಮತ್ತು ಈ ಕಾರ್ಯಕ್ರಮವು ಸಮಾರಂಭದ ಭಾಗ ಆಗಬಹುದು.

ಶಬ್ಧ ಮಾಡುವ ಬಗ್ಗೆ ಬಂದೂಕು ಹೊಡೆಯುವುದರಿಂದ ಅಥವಾ ಸೈರನ್‌ಗಳನ್ನು ಬೆಂಗಳೂರಿನಲ್ಲಿ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಮತ್ತು ಇತರೆ ನಗರ/ಪಟ್ಟಣಗಳಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಸೂಕ್ತ ವ್ಯವಸ್ಥೆಗಳನ್ನು ಮಾಡಲು ಕರ್ನಾಟಕ ರಾಜ್ಯದ ಆರಕ್ಷಕ ಮಹಾನಿರೀಕ್ಷಕರು ಕ್ರಮ ತೆಗೆದುಕೊಳ್ಳುವರು.

ಕೆಲವು ಕಚೇರಿಗಳಲ್ಲಿ ಈ 2 ನಿಮಿಷಗಳ ಮೌನ ಆಚರಣೆಯನ್ನು ಮಾಡುತ್ತಿರುವಾಗ ಸಾಮಾನ್ಯ ಜನತೆ ಈ ಮೌನ ಆಚರಣೆ ಸಂದರ್ಭದ ಪಾವಿತ್ರ್ಯತೆಯನ್ನು ಗಮನದಲ್ಲಿ ಇಡದೇ ತನ್ನ ಕಾರ್ಯದಲ್ಲಿ ನಿರತವಾಗುವುದನ್ನು ಗಮನಿಸಲಾಗಿದೆ. ಆದುದರಿಂದ ಹುತಾತ್ಮರ ದಿನಾಚರಣೆಯನ್ನು ಸೂಕ್ತವಾಗಿ ಸಲ್ಲಿಸಬೇಕಾದ ಪ್ರಾವಿತ್ರ್ಯತೆಯನ್ನು ಆಚರಿಸಬೇಕಾಗಿರುವುದರಿಂದ ಸಾಮಾನ್ಯ ಜನತೆಯೂ ಭಾಗವಹಿಸುವುದರೊಡನೆ ಈ ಹುತಾತ್ಮರ ದಿನಾಚರಣೆಯನ್ನು ತಪ್ಪದೇ ಆಚರಿಸಬೇಕಾಗಿರುವ ಎಲ್ಲಾ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕೆಂದೇ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಿಗಳಿಗೆ ರಾಜ್ಯ ಸರ್ಕಾರದಿಂದ ಸೂಚಿಸಲಾಗಿದೆ. ಈ ಉದ್ದೇಶಕ್ಕಾಗಿ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಲಾಗಿದೆ.

ಹುತಾತ್ಮರ ದಿನವನ್ನುಪೂರ್ಣ ಪ್ರಾವಿತ್ರ್ಯತೆ ಮತ್ತು ಯೋಗ್ಯ (befitting) ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಸೂಚನೆಗಳನ್ನು ನೀಡುವುದು. ಈ ದಿನದ ವಿಶೇಷತ್ವಕ್ಕೆ ಸಂಬಂಧಿಸಿದಂತೆ ಭಾಷಣಗಳನ್ನು ಆದರಲ್ಲೂ ವಿಶೇಷವಾಗಿ ಭಾರತದ ಸ್ವಾತಂತ್ರ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವನ್ನು ತಿಳಿಸುವಂತಹ ಭಾಷಣ/ಚರ್ಚೆಗಳನ್ನು ಏರ್ಪಡಿಸಬೇಕು. ಈ ಭಾಷಣಗಳ ಮುಖ್ಯಾಂಶಗಳಲ್ಲಿ ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸುವುದು. ಸಂರಕ್ಷಿಸುವುದು ಮತ್ತು ಶ್ರೀಮಂತಗೊಳಿಸುವುದಲ್ಲದೆ. ರಾಷ್ಟ್ರದ ಐಕ್ಯತೆಯನ್ನು ಉತ್ತೇಜಿಸುವುದು ಮತ್ತು ಒಂದೇ ಗುರಿಗಳು ಮತ್ತು ಆದರ್ಶಗಳಿಗೆ ಬದ್ಧರಾಗುವ ಅಂಶಗಳನ್ನೊಳಗೊಂಡಿರಬೇಕು.

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದವರ ಪಾತ್ರ ಮತ್ತು ರಾಷ್ಟ್ರೀಯ ಐಕ್ಯತೆಯ (National Integration) ಮೂಲ ಉದ್ದೇಶಗಳು ಇರುವ ಸಾಂಸ್ಕೃತಿಕ ಕಾರ್ಯಕ್ರಮಗಳ/ಡಾಕ್ಯುಮೆಂಟರಿ ಚಿತ್ರಗಳ ಪ್ರದರ್ಶನಗಳ ಏರ್ಪಾಡುಗಳನ್ನು ರಾಜ್ಯದ ಪ್ರಚಾರ ಘಟಕಗಳು ಮಾಡಬಹುದು.

ಸದಸ್ಯರು ಹಾಗೂ ಸಂಯೋಜಿತ ಸಂಘ ಮತ್ತು ಸಂಸ್ಥೆಗಳು ಹುತಾತ್ಮರ ದಿನಾಚರಣೆಯನ್ನು ಸೂಕ್ತವಾಗಿ ಆಚರಿಸಬೇಕೆಂಬುದರ ಕುರಿತು ವಿವಿಧ ವಾಣಿಜ್ಯ ಮತ್ತು ಕೈಗಾರಿಕಾ ಮಹಾಮಂಡಳಿಗಳನ್ನು (Chamber of Commerce and Industries ) ಕೋರಬಹುದು.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಎಲ್ಲಾ ಪ್ರಾದೇಶಿಕ ಆಯುಕ್ತರು, ಇಲಾಖಾ ಮುಖ್ಯಸ್ಥರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತಿತರ ಸಂಬಂಧಪಟ್ಟ ಅಧಿಕಾರಿಗಳು ಸೂಚಿಸಿರುವ ನಿರ್ದೇಶನಗಳನ್ನು ಅನುಸರಿಸಲು ಸೂಕ್ತಕ್ರಮ ಕೈಗೊಳ್ಳಬೇಕೆಂದು ರಾಜ್ಯ ಸರ್ಕಾರವು ಸೂಚಿಸಿದೆ.

ಬಾಬು: ಕೆಎಂ

## ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ – 2016 ವಿಧಾನ ಸೌಧದ ಮುಂದೆ ನಾಳೆ ಉದ್ಘಾಟನೆ

**ಬೆಂಗಳೂರು, ಜನವರಿ 27, (ಕರ್ನಾಟಕ ವಾರ್ತೆ)**

**ರಾಜ್ಯ ಸರ್ಕಾರವು ಕರ್ನಾಟಕ ಚಲನಚಿತ್ರ ಅಕಾಡೆಮಿ ಮತ್ತು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಶ್ರಯದಲ್ಲಿ ಜನವರಿ 28 ರಿಂದ ಫೆಬ್ರವರಿ 5 ರವರೆಗೆ ಬೆಂಗಳೂರು ಹಾಗೂ ಮೈಸೂರಿನಲ್ಲಿ ನಡೆಸಲಿರುವ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ – 2016 ಹಲವು ಪ್ರಥಮಗಳನ್ನು ಒಳಗೊಂಡಿದೆ.**

- **ಪ್ರಪ್ರಥಮ ಬಾರಿಗೆ ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ ಸಂಘಟನಾ ಸಮಿತಿಯ ಗೌರವಾಧ್ಯಕ್ಷರಾಗಿರುತ್ತಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರು ಕಾರ್ಯಾಧ್ಯಕ್ಷರಾಗಿರುತ್ತಾರೆ. ಖ್ಯಾತ ಚಿತ್ರನಟಿ ಹಾಗೂ ವಿಧಾನ ಪರಿಷತ್ ಸದಸ್ಯೆ ಶ್ರೀಮತಿ ಜಯಮಾಲಾ ಅವರು ಕಲಾ ನಿರ್ದೇಶಕರಾಗಿದ್ದಾರೆ.**
- **ಏಕಕಾಲದಲ್ಲಿ ಬೆಂಗಳೂರು ಹಾಗೂ ಮೈಸೂರು ಎರಡು ನಗರಗಳಲ್ಲಿ ಚಲನಚಿತ್ರೋತ್ಸವ ನಡೆಯಲಿದೆ.**
- **ಈ ಬಾರಿಯ ಬೆಂಗಳೂರು ಚಲನ ಚಿತ್ರೋತ್ಸವವು ಒಂದೇ ಸೂರಿನಡಿ ಎರಡು ನಗರಗಳಲ್ಲಿ ನಡೆಯುತ್ತಿದೆ. ಬೆಂಗಳೂರಿನಲ್ಲಿ ರಾಜಾಜಿನಗರದ ಓರಿಯನ್ ಮಾಲ್‌ನ 11 ಬೆಳ್ಳಿ ಪರದೆಗಳ ಮೇಲೆ ಚಿತ್ರೋತ್ಸವದ ಚಿತ್ರಗಳು ಮೂಡಿಬರಲಿದೆ. ಹಾಗೆಯೇ ಮೈಸೂರಿನ ಐನಾಕ್ಸ್ ಚಲನಚಿತ್ರಮಂದಿರದ 4 ಬೆಳ್ಳಿ ಪರದೆಗಳಲ್ಲಿ ಚಲನಚಿತ್ರ ಪ್ರದರ್ಶಿತಗೊಳ್ಳಲಿದೆ.**
- **ಜನವರಿ 28 ರಂದು ಸಂಜೆ 5–30 ಗಂಟೆಗೆ ವಿಧಾನಸೌಧದ ಮುಂಭಾಗದ (ಉಚ್ಚ ನ್ಯಾಯಾಲಯದ ಎದುರು ಭಾಗ) ಬೆಂಗಳೂರು ಅಂತರ ರಾಷ್ಟ್ರೀಯ ಚಲನಚಿತ್ರೋತ್ಸವ – 2016 ಉದ್ಘಾಟನೆಗೊಳ್ಳಲಿದೆ.**
- **ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರ್ಯೋತ್ಸವವನ್ನು ಭಾರತೀಯ ಚಿತ್ರರಂಗದ ಪ್ರಖಾತ ತಾರೆ ಶ್ರೀಮತಿ ಜಯಬಚ್ಚನ್ ಉದ್ಘಾಟಿಸುವರು. ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಅಧ್ಯಕ್ಷತೆ ವಹಿಸುವರು.**

- ಚಲನಚಿತ್ರೋತ್ಸವ ಸಮಾರೋಪ ಸಮಾರಂಭವು ಫೆಬ್ರವರಿ 5 ರಂದು ಮೈಸೂರಿನ ಅರಮನೆ ಆವರಣದಲ್ಲಿ ನಡೆಯಲಿದೆ.
- ಈ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ದೇಶ-ವಿದೇಶಗಳಿಂದ ಚಲನಚಿತ್ರರಂಗದ 50 ಕ್ಕೂ ಗಣ್ಯ ಪ್ರತಿನಿಧಿಗಳು, ಚಲನಚಿತ್ರ ನಿರ್ದೇಶಕರು, ತಂತ್ರಜ್ಞರು ಪಾಲ್ಗೊಳ್ಳುವರು.

- ಈ ಬಾರಿ ಕನ್ನಡ ಚಿತ್ರಗಳ ಸ್ಪರ್ಧೆಯ ವಿಜೇತರನ್ನು ಅಂತರರಾಷ್ಟ್ರೀಯ ಖ್ಯಾತಿಯ ತೀರ್ಪುಗಾರರು ನಿರ್ಧರಿಸಲಿದ್ದಾರೆ.
- ಹಲವು ವೈಶಿಷ್ಟ್ಯಗಳನ್ನು ಚಿತ್ರ ಪ್ರದರ್ಶನದಲ್ಲಿ ಅಳವಡಿಸಲಾಗಿದೆ. ಅವುಗಳೆಂದರೆ.
  1. ಸಮಕಾಲೀನ ಜಾಗತಿಕ ಚಿತ್ರಗಳ ಪ್ರದರ್ಶನ.
  2. ಮೆಕ್ಸಿಕೋ, ಇರಾನ್, ಟರ್ಕಿ ದೇಶಗಳ ಚಿತ್ರಗಳ ವಿಶೇಷ ಆವಲೋಕನ
  3. ಅಂತರರಾಷ್ಟ್ರೀಯ ಖ್ಯಾತಿಯ ನಿರ್ದೇಶಕರಾದ ಹಂಗೇರಿಯ ಇಸ್ಟ್ವಾನ್ ಝಬೋ ಹಾಗೂ ಡೆನ್‌ಮಾರ್ಕ್‌ನ ನಿಲ್ಸ್ ಮ್ಯಾಲ್ಮರೋಸ್ ಅವರ ಚಿತ್ರಗಳ ಪ್ರದರ್ಶನಕ್ಕೆ ಒತ್ತು.
  4. ಕಲಾವಿದರ ಸಿಂಹಾವಲೋಕನ ವಿಭಾಗದಲ್ಲಿ ಪಂಚಭಾಷಾ ತಾರೆ, ಪದ್ಮಭೂಷಣ ಶ್ರೀಮತಿ ಬಿ. ಸರೋಜಾ ದೇವಿ ಅವರ ಚಿತ್ರಗಳ ಪ್ರದರ್ಶನ.
  5. ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತರ ಚಿತ್ರ ಪ್ರದರ್ಶನದಲ್ಲಿ ಮೃಣಾಲ್ ಸೇನ್ ಹಾಗೂ ಅಡೂರ್ ಗೋಪಾಲ್ ಕೃಷ್ಣ ಅವರ ಚಿತ್ರಗಳ ಪ್ರದರ್ಶನ.
  6. ಕನ್ನಡದ ಖ್ಯಾತ ಚಿತ್ರ ನಿರ್ದೇಶಕರಾದ ಶ್ರೀ ಸಿದ್ದಲಿಂಗಯ್ಯ ಹಾಗೂ ಶ್ರೀ ಕೆ.ಎಸ್.ಎಲ್. ಸ್ವಾಮಿ (ರವೀ) ಅವರಿಗೆ ನಮನ ಸಲ್ಲಿಸಲು ಅವರ ಚಿತ್ರಗಳ ಪ್ರದರ್ಶನ.
  7. ಮೊದಲ ಬಾರಿಗೆ ಸಾಕ್ಷ್ಯಚಿತ್ರಗಳ ಪ್ರದರ್ಶನ. ಬರ ಕುರಿತಂತೆ ದೇಶ ವಿದೇಶಗಳಲ್ಲಿ ಸಿದ್ಧಗೊಂಡಿರುವ ಸಾಕ್ಷ್ಯಚಿತ್ರಗಳ ಪ್ರದರ್ಶನಕ್ಕೆ ಆದ್ಯತೆ.
- ಬರ್ಲಿನ್, ಕಾನ್ಸ್, ಟೊರೆಂಟೋ, ಗೋವಾ, ಮುಂಬೈ ಹಾಗೂ ಕೇರಳಾ ಅಂತರರಾಷ್ಟ್ರೀಯ ಚಿತ್ರೋತ್ಸವಗಳಲ್ಲಿ ಪ್ರದರ್ಶನಗೊಂಡ ಅತ್ಯುತ್ತಮ ಏಷಿಯನ್ ಮತ್ತು ಜಾಗತಿಕ ಸಿನಿಮಾಗಳನ್ನು ಪ್ರದರ್ಶನಕ್ಕೆ ಆಯ್ಕೆ ಮಾಡಲಾಗಿದೆ.
- ಅಂತರರಾಷ್ಟ್ರೀಯ ಖ್ಯಾತಿಯ ನಿರ್ದೇಶಕರಾದ ಇರಾನ್‌ನ ಜಾಫರ್ ಪಹಾನಿ, ಚೀನಾದ ಜಿಯಾ ಝೂಂಗ್ ಕೆ, ಜಪಾನ್‌ನ ಹೋ ಸಿಯಾವೋ ಸಿಯೆನ್, ಟರ್ಕಿಯ ಯಮಿನ್ ಅಲ್ಫರ್, ಫ್ರಾನ್ಸ್‌ನ ಜಾಕ್ಸ್ ಅಡಿಯಾರ್ಸ್, ಜರ್ಮನಿಯ ಕ್ರಿಶ್ಚಿಯನ್ ಪೆಝೋಲ್ಡ್, ಇಟಲಿಯನ್ ಮೊರೆಟ್ಟಿ, ಅವರ ಚಿತ್ರಗಳು ಪ್ರದರ್ಶನಗೊಳ್ಳಲಿವೆ.
- ಕನ್ನಡ, ಸಂಸ್ಕೃತಿ, ವಾರ್ತಾ ಹಾಗು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಡಾ. ಎನ್. ಎಸ್. ಚನ್ನಪ್ಪಗೌಡ, ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಶ್ರೀ ಎಸ್. ವಿ. ರಾಜೇಂದ್ರಸಿಂಗ್ ಬಾಬು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್, ಖ್ಯಾತ ನಿರ್ದೇಶಕರಾದ ಡಾ. ಗಿರೀಶ್ ಕಾಸರವಳ್ಳಿ, ಟಿ. ಎಸ್. ನಾಗಾಭರಣ, ಆರ್.ಪಿ.ಶರ್ಮಾ, ನಟಿ ರಾಧಿಕಾ ಪಂಡಿತ್, ಪತ್ರಕರ್ತ ವಿಶಾಖ ಎನ್., ಸೆನ್ಸಾರ್ ಮಂಡಳಿಯ ಸ್ಥಳೀಯ ಮುಖ್ಯಸ್ಥರು, ಫಿಲ್ಮಂ ಸೊಸೈಟಿ ಅಧ್ಯಕ್ಷರು, ಚಿಲ್ಡ್ರನ್ಸ್ ಇಂಡಿಯಾದ ಅಧ್ಯಕ್ಷ ನಂಜುಂಡೇಗೌಡ, ಸಂಘಟನಾ ಸಮಿತಿಯ ಸದಸ್ಯರಾಗಿರುತ್ತಾರೆ.
- ಖ್ಯಾತ ಸಿನಿಮಾ ತಜ್ಞ ವಿದ್ಯಾ ಶಂಕರ್ ಕಾರ್ಯಕಾರಿ ಕಲಾ ನಿರ್ದೇಶಕರಾಗಿರುತ್ತಾರೆ.

- ಕೇಂದ್ರ ಸರ್ಕಾರ ಗೋವಾದಲ್ಲಿ ಸಂಘಟಿಸುವ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ನಿರ್ದೇಶಕರಾಗಿದ್ದ ಶ್ರೀ ಶಂಕರ್ ಮೋಹನ್ ಅವರು ಸಲಹೆಗಾರರಾಗಿರುತ್ತಾರೆ.

ಬಾಬು::ಕೆಎಂ

**NOTIFICATION REGARDING ADMISSION IN CLASS IX AGAINST VACANT SEATS FOR THE SESSION 2016-17**

Bangalore, January 27, (Karnataka Information)

Applications are invited for admission of students to class IX against 05 vacant seats in Jawahar Navodaya Vidyalaya, Bagalur, Bangalore Urban District for the academic year 2016-17.

Last date for submission of application to the Principal, Jawahar Navodaya Vidyalaya, Bagalur, Bangalore Urban District is 29.02.2016(Monday). Date of written test is 24.04.2016 (Sunday) at 10.00 hrs.

Application forms are available with the Principal of Jawahar Navodaya Vidyalaya or can be download from the website http://www.nvshq.org & www.jnvbangaloreurban.com

For further details contact vidyalaya Phone No-080 28469055